## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೂಲನಿವಾಸಿ ಬುಡಕಟ್ಟು ಜನಾಂಗದವರ ಅಭಿವೃದ್ಧಿಗಾಗಿ ಸಿಸಿಡಿ ಯೋಜನೆಯಡಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಮೌಲ್ಯಮಾಪನ ಮಾಡುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಸಕಇ 56 ಪವಯೋ 2010 ದಿನಾಂಕ 14-03-2012

2. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ: ಟಿಆರ್‌ಐ/ಮೈ/ಸಿಆರ್/2012-13, ದಿನಾಂಕ: 01-10-2012

3. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ:ಟಿಆರ್‌ಐ/ಮೈ/ಸಿಆರ್-109/2011-12, ದಿನಾಂಕ: 09-11-2012.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ 2011-12ನೇ ಸಾಲಿಗೆ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಕೇಂದ್ರ ಹಾಗೂ ರಾಜ್ಯ ಪಾಲುಗಳ ಅನುದಾನದಲ್ಲಿ ಮೌಲ್ಯಮಾಪನಕ್ಕಾಗಿ ಕೇಂದ್ರವಾರು ಮತ್ತು ರಾಜ್ಯವಾರು ಪಾಲು ಒಟ್ಟು ರೂ.4.00 ಲಕ್ಷಗಳ ಅನುದಾವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರ ಪತ್ರಗಳಲ್ಲಿ ನಿರ್ದೇಶಕರು, ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರು ಮೇಲ್ಕಂಡ ಅನುದಾನ ಮೊತ್ತ ರೂ.4.00 ಲಕ್ಷಗಳಲ್ಲಿ ಮೂಲನಿವಾಸಿ ಬುಡಕಟ್ಟು ಜನಾಂಗದವರ ಅಭಿವೃದ್ಧಿಗಾಗಿ ಸಿಸಿಡಿ ಯೋಜನೆಯಡಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಮೌಲ್ಯಮಾಪನವನ್ನು ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 218 ಪವಯೋ 2012, ಬೆಂಗಳೂರು**
**ದಿನಾಂಕ:18-03-2013**

ಕರ್ನಾಟಕ ರಾಜ್ಯದಲ್ಲಿನ ಮೂಲನಿವಾಸಿ ಬುಡಕಟ್ಟು ಜನಾಂಗದವರ ಅಭಿವೃದ್ಧಿಗಾಗಿ ಸಿಸಿಡಿ ಯೋಜನೆಯಡಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಪ್ರಸ್ತಾವನೆಯಲ್ಲಿ ನಮೂದಿಸಿರುವ ಪ್ರಶ್ನಾವಳಿಗಳನ್ನು ಅಳವಡಿಸಿಕೊಂಡು ಮೌಲ್ಯಮಾಪನವನ್ನು ರೂ. 4.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ನಿರ್ದೇಶಕರು, ಗಿರಿಜನ ಸಂಶೋಧನ ಸಂಸ್ಥೆ, ಮೈಸೂರು, ಇವರಿಗೆ ಸರ್ಕಾರದ ತಾತ್ವಿಕ ಮಂಜೂರಾತಿ ನೀಡಲಾಗಿದೆ.

ಮೌಲ್ಯಮಾಪನವನ್ನು 6 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 04ಟಿಎಫ್‌ಪಿ2012, ದಿನಾಂಕ: 27-06-2012 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳ ಶಾಖೆ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಶಾಖಾ ರಕ್ಷಾ ಕಡತ.
7) ಹೆಚ್ಚುವರಿ ಪ್ರತಿ-03.